1 ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ನಂಜನಗೂಡು

ಸಿ.ಸಿ.ಸಂಖ್ಯೆ:1381/2021

ಪಿರ್ಯಾದಿ ಬಿಳಿಗೆರೆ ಪೊಲೀಸರು

ವಿರುದ್ಧ

ಆರೋಪಿ

ಪ್ರಕಾಶ, ಬಿನ್.ಲೇ.ಲಕ್ಷ್ಮಣನಾಯಕ,

35 ವರ್ಷ, ವಾಸಃ ಗೋಣಹಳ್ಳಿ ಗ್ರಾಮ, ನಂಜನಗೂಡು ತಾ

ದೋಷಾರೋಪಣೆ

ಶ್ರೀಮತಿ.ಸರಿತಾ ಕುಮಾರಿ.ಎ.ಎಂ, ಬಿ.ಎ.,ಎಲ್.ಎಲ್.ಬಿ., 1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನಂಜನಗೂಡು ಆದ ನಾನು ಆರೋಪಿತರಾದ ನಿಮ್ಮ ಮೇಲೆ ದೋಷಾರೋಪಿಸುವುದೇನೆಂದರೆ:-

ದಿನಾಂಕ :01.06.2021 ರಂದು ಮಧ್ಯಾಹ್ನ 12.00 ಗಂಟೆ ಸಮಯದಲ್ಲಿ ಬಿಳಿಗೆರೆ ಪೊಲೀಸ್ ಠಾಣಾ ಸರಹದ್ದಿಗೆ ಸೇರಿದ ಗೋಣಹಳ್ಳಿ ನಂಜನಗೂಡು ರಸ್ತೆಯ ಪೂಜಾರಿ ನಂಜನಾಯಕ ರವರ ಮನೆಯ ಮುಂದೆ ಆರೋಪಿಯಾದ ನೀವು ಚಾಸಾ.1 ರವರಿಗೆ ಯಾಕೆ ನಮ್ಮ ಮನೆಗೆ ಹೋಗಿದ್ದೆ ಎಂದು ವಿನಾ ಕಾರಣ ತೀಟೆ ಜಗಳ ತೆಗೆದು ಬೋಳಿ ಮಗನೆ, ಸೂಳೆ ಮಗನೇ ಎಂದು ಅವಾಚ್ಯ ಶಬ್ದಗಳಿಂದ ಬೈದಿರುತ್ತೀರಿ ಮತ್ತು ಮಧ್ಯಾಹ್ನ 1 ಗಂಟೆಗೆ ಗೋಣಹಳ್ಳಿ ಗ್ರಾಮದ ಆಲದಮರದ ಸರ್ಕಲನಲ್ಲಿ ಚಾಸಾ.2,4,5 ಮತ್ತು 6 ರವರಿಗೆ ಚಾಸಾ.1 ರವರು ಗಲಾಟೆಯ ವಿಚಾರವನ್ನು ಮಾತನಾಡುತ್ತಿದ್ದಾಗ ಆರೋಪಿಯಾದ ನೀವು ಅಲ್ಲಿಗೂ ಬಂದು, ಚಾಸಾ.2,4,5 ಮತ್ತು 6 ರವರಿಗೆ ಬೋಳಿ ಮಕ್ಕಳೆ, ಸೂಳೆ ಮಕ್ಕಳೆ ಎಂದು ಬೈದು ಉದ್ರೇಕವನ್ನುಂಟು ಮಾಡಿದರೆ ಅಂತಹ ಉದ್ರೇಕದಿಂದ ಶಾಂತಿ ಭಂಗ ಮಾಡಲಿ ಅಥವಾ ಇತರೆ ಯಾವುದೇ ಅಪರಾಧ ಮಾಡಲಿ ಎನ್ನುವ ಉದ್ದೇಶದಿಂದ ಚಾಸಾ.1,2,4,5 ಮತ್ತು 6 ರವರನ್ನು ಅವಮಾನಿಸಿರುತ್ತೀರಿ. ಆದ್ದರಿಂದ ಆರೋಪಿಯಾದ ನೀವು ಭಾರತ ದಂಡ ಸಂಹಿತೆಯ ಕಲಂ. 504 ರಡಿಯಲ್ಲಿ ದಂಡಿಸಲ್ಪಡುವ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯತೆಯಲ್ಲಿ ಎಸಗಿರುತ್ತೀರೆಂದು ನಿಮ್ಮ ಮೇಲೆ ಆಪಾದಿಸಲಾಗಿದೆ.

ಎರಡನೇಯದಾಗಿ, ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿಯಾದ ನೀವು ಚಾಸಾ.1 ರವರನ್ನು ತಡೆದು ನಿಲ್ಲಿಸಿ ಅಕ್ರಮ ತಡೆಯನ್ನುಂಟುಮಾಡಿರುತ್ತೀರಿ. ಆದ್ದರಿಂದ ಆರೋಪಿಯಾದ ನೀವು ಭಾರತ ದಂಡ ಸಂಹಿತೆಯ ಕಲಂ.341 ರಡಿಯಲ್ಲಿ ದಂಡಿಸಲ್ಪಡುವ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯತೆಯಲ್ಲಿ ಎಸಗಿರುತ್ತೀರೆಂದು ನಿಮ್ಮ ಮೇಲೆ ಆಪಾದಿಸಲಾಗಿದೆ.

ಮೂರನೇಯದಾಗಿ, ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿಯಾದ ನೀವು ಚಾಸಾ.1 ರವರ ಕತ್ತಿನ ಪಟ್ಟಿ ಹಿಡಿದು ಕೈಗಳಿಂದ ಮೈಕೈಗೆ ಹಾಗೂ ಬಲಕೆನ್ನೆಗೆ ಸ್ವ ಇಚ್ಚೆಯಿಂದ ಹೊಡೆದು ಸಾಮಾನ್ಯ ಸ್ವರೂಪದ ನೋವುಂಟು ಮಾಡಿರುತ್ತೀರಿ. ಆದ್ದರಿಂದ ಆರೋಪಿಯಾದ ನೀವು ಭಾರತ ದಂಡ ಸಂಹಿತೆಯ ಕಲಂ.323 ರಡಿಯಲ್ಲಿ ದಂಡಿಸಲ್ಪಡುವ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯತೆಯಲ್ಲಿ ಎಸಗಿರುತ್ತೀರೆಂದು ನಿಮ್ಮ ಮೇಲೆ ಆಪಾದಿಸಲಾಗಿದೆ.

ಕೊನೆಯದಾಗಿ, ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿಯಾದ ನೀವು ಚಾಸಾ.1 ರವರ ಕೈಯಲ್ಲಿದ್ದ ನೋಟೀಸ್ ಕವರುಗಳನ್ನು ಕಿತ್ತುಕೊಂಡು ಹರಿದು ಹಾಕಿ ಚಾಸಾ.1 ರವರ ಸರ್ಕಾರಿ ಕೆಲಸಕ್ಕೆ ಅಡ್ಡಿ ಮಾಡಿರುತ್ತೀರಿ. ಆದ್ದರಿಂದ ಆರೋಪಿಯಾದ ನೀವು ಭಾರತ ದಂಡ ಸಂಹಿತೆಯ ಕಲಂ.353 ರಡಿಯಲ್ಲಿ ದಂಡಿಸಲ್ಪಡುವ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯತೆಯಲ್ಲಿ ಎಸಗಿರುತ್ತೀರೆಂದು ನಿಮ್ಮ ಮೇಲೆ ಆಪಾದಿಸಲಾಗಿದೆ.

(ಮೇಲ್ಕಂಡ ಆರೋಪವನ್ನು ಆರೋಪಿತರಿಗೆ ಓದಿ ಹೇಳಿ ಕೇಳಲಾಯಿತು. ಆರೋಪಿ ಕೊಟ್ಟ ಉತ್ತರವನ್ನು ಅವರು ಉತ್ತರಿಸಿದಂತೆಯೇ ಬರೆದುಕೊಂಡಿದ್ದು ಸಂಪೂರ್ಣ ಹಾಗೂ ಸರಿಯಾದ ಮಾಹಿತಿಯನ್ನು ಒಳಗೊಂಡಿದೆ ಎಂದು ದಿನಾಂಕ 29.01.2026 ರಂದು ತೆರೆದ ನ್ಯಾಯಾಲಯದಲ್ಲಿ ದೃಢೀಕರಿಸಿರುತ್ತೇನೆ.)

1 ನೇ ಹೆ ಸಿ.ಜೆ. ಮತ್ತು ಜೆ.ಎಂ.ಎಫ್.ಸಿ.
ನಂಜನಗೂಡು

1 ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ನಂಜನಗೂಡು

<u>ಸಿ.ಸಿ.ಸಂಖ್ಯೆ:1381/2021</u>

ಪಿರ್ಯಾದಿ ಬಿಳಿಗೆರೆ ಪೊಲೀಸರು

ವಿರುದ್ಧ

ಆರೋಪಿ

ಪ್ರಕಾಶ, ಬಿನ್.ಲೇ.ಲಕ್ಷ್ಮಣನಾಯಕ,

35 ವರ್ಷ, ವಾಸಃ ಗೋಣಹಳ್ಳಿ ಗ್ರಾಮ, ನಂಜನಗೂಡು ತಾ

: ಆಪಾದನೆ :

ಪ್ರಶ್ನೆ-1 : ಮೇಲ್ಕಂಡ ಎಲ್ಲಾ ಆಪಾದನೆಗಳನ್ನು ಓದಿ ಹೇಳಿದ್ದು ಅರ್ಥವಾಯಿತೇ **?**
ಉತ್ತರ :

ಪ್ರಶ್ನೆ-2 : ಸದರೀ ಆಪಾದನೆಗಳನ್ನು ಒಪ್ಪಿಕೊಳ್ಳುವೆಯಾ ಅಥವಾ ವಿಚಾರಣೆಯಾಗಬೇಕೋ**?**
ಉತ್ತರ :

ಮೇಲ್ಕಂಡ ಎಲ್ಲಾ ಆಪಾದನೆಗಳನ್ನು ನನ್ನ ಸಮಕ್ಷಮ ಓದಿ ಹೇಳಿ ಆರೋಪಿತನ ಹೇಳಿಕೆಯನ್ನು ಪಡೆದುಕೊಂಡು ಸತ್ಯವಾಗಿದೆ ಎಂದು ದೃಢೀಕರಿಸಲಾಗಿದೆ.

1 ನೇ ಹೆ ಸಿ.ಜೆ. ಮತ್ತು ಜೆ.ಎಂ.ಎಫ್.ಸಿ.
**ನಂಜನಗೂಡು**